ಮನುಷ್ಯ ಪ್ರಾಣಿಯೇ ಪರಿಸರಕ್ಕೆ ಹಾನಿಯನ್ನುಂಟು ಮಾಡುವ ಪ್ರಾಣಿ. ಮನುಷ್ಯರು ಪರಿಸರಕ್ಕೆ ಪೂರಕ ಕಾರ್ಯ ಮಾಡಬೇಕೇ ವಿನಾ ಹಾನಿಯಾಗುವ ಕಾರ್ಯ ಮಾಡಬಾರದು.

• **ಶೇಖರಗೌಡ ಪಾಟೀಲ** ಮಾಜಿ ಸೈನಿಕ

ಸುದ್ದಿ ಸಿಂಚನ

ಲಕ್ಕುಂಡಿ ಇತಿಹಾಸ ಬಿಂಬಿಸುವ ಲೋಗೋ ಆಹ್ವಾನ

ಗದಗ: ಲಕ್ಕುಂಡಿ ಗ್ರಾಮವು ತನ್ನ ಶ್ರೀಮಂತ ಇತಿಹಾಸ, ವೈಭವಮಯ ಸಂಸ್ಕೃತಿ ಮತ್ತು ಅನನ್ಯ ಪರಂಪರೆಯ ಮೂಲಕ ರಾಜ್ಯದ ಪ್ರಮುಖ ಪಾರಂಪರಿಕ ಕೇಂದ್ರವಾಗಿದ್ದು, ನವಶಿಲಾಯುಗದಿಂದ ಇತ್ತೀಚಿನ ವರಗಿನ ಪರಂಪರೆಯನ್ನು ಪ್ರತಿಬಿಂಬಿಸುವ ವಿಶೇಷ ಲೋಗೋವನ್ನು ವಿನ್ಯಾಸಗೊಳಿಸಲು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ರಾಜ್ಯ ಮಟ್ಟದಲ್ಲಿ ಕಲಾವಿದರಿಂದ ಲೋಗೋವನ್ನು ವಿನ್ಯಾಸಗೊಳಿಸಲು ಆಹ್ವಾನಿಸಲಾಗಿದೆ.

ಲೋಗೋ ವಿನ್ಯಾಸಗಳನ್ನು JPEG ಹಾಗೂ PDF ಮಾದರಿಯಲ್ಲಿ ತಯಾರಿಸಿ lakkundipradhikara@gmail.com ಇಮೇಲ್ ವಿಳಾಸಕ್ಕೆ ಕಳುಹಿಸಬೇಕು. ಒಬ್ಬ ಕಲಾವಿದ ಗರಿಷ್ಠ 3 ಲೋಗೋಗಳನ್ನು ಮಾತ್ರ ಸಲ್ಲಿಸಬಹುದು. ವಿನ್ಯಾಸಗಳನ್ನು ಮೇ 30ರೊಳಗಾಗಿ ಕಳುಹಿಸಬೇಕು. ಆಯ್ಕೆಯಾದ ಲೋಗೋ ವಿನ್ಯಾಸಗೊಳಿಸಿದ ಕಲಾವಿದರಿಗೆ ಪ್ರೋತ್ಸಾಹಕವಾಗಿ ₹25,000 ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆಯುಕ್ತರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ. ಕೊಠಡಿ ಸಂಖ್ಯೆ: 04 ನೆಲಮಹಡಿ ಜಿಲ್ಲಾಡಳಿತ ಭವನ ಹುಬ್ಬಳ್ಳಿ ರಸ್ತೆ, ಗದಗ (ಮೊ. 9620988939 ಲ.ಪಾ.ಪ.ಅ.ಪ್ರಾ. ಆಯುಕ್ತರು ಶರಣು ಗೋಗೇರಿ, ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಅನುಮತಿ ಇಲ್ಲದೇ ಸೋಲಾರ್ ಪ್ಯಾನಲ್ ಅಳವಡಿಕೆ!

102 ಹೆಕ್ಟೇರ್‌ನಲ್ಲಿ ಅಳವಡಿಕೆ | ಖಾಸಗಿ ಕಂಪನಿ ದಬ್ಬಾಳಿಕೆಯಿಂದ ನೀರಾವರಿ ನಿಗಮಕ್ಕೆ ₹4.62 ಕೋಟಿ ನಷ್ಟ

• **ಶಿವಕುಮಾರ ಕುಷ್ಟಗಿ**
ಕನ್ನಡಪ್ರಭ ವಾರ್ತೆ ಗದಗ

ಜಿಲ್ಲೆಯಲ್ಲಿ ಗಾಳಿ ವಿದ್ಯುತ್ ಉತ್ಪಾದನಾ ಕಂಪನಿಗಳು, ಸೋಲಾರ್ ವಿದ್ಯುತ್ ಕಂಪನಿಗಳು ಜಿಲ್ಲಾಡಳಿತವನ್ನು ತನ್ನ ಇಚ್ಛೆಯಂತೆ ಕುಣಿಸುತ್ತಿದ್ದು, ಇದಕ್ಕೆ ಪರೋಕ್ಷವಾಗಿ ಜಿಲ್ಲಾಧಿಕಾರಿ, ಜಿಲ್ಲೆಯ ಜನಪ್ರತಿನಿಧಿಗಳು ಸಾಥ್ ನೀಡುತ್ತಿರುವ ಹಿನ್ನೆಲೆ ಮುಂಡರಗಿ ತಾಲೂಕಿನ ಡಂಬಳ ಹೋಬಳಿಯಲ್ಲಿ ನೀರಾವರಿ ಇಲಾಖೆಯ ಅನುಮತಿ ಇಲ್ಲದೇ ಖಾಸಗಿ ಕಂಪನಿಯೊಂದು 102 ಹೆಕ್ಟೇರ್ ಪ್ರದೇಶದಲ್ಲಿ ಸೋಲಾರ್ ಪ್ಯಾನಲ್ ಅಳವಡಿಸಿದ ಪ್ರಕರಣ ಬೆಳಕಿಗೆ ಬಂದಿದೆ.

ಸಿಂಗಟಾಲೂರು ಏತ ನೀರಾವರಿ ಯೋಜನೆಯನ್ನು ಸರ್ಕಾರ ಸೂಕ್ಷ್ಮ ನೀರಾವರಿ ಯೋಜನೆಯನ್ನಾಗಿ ರೂಪಿಸಿದ್ದು, ಮುಂಡರಗಿ ತಾಲೂಕಿನಾದ್ಯಂತ ಕಾಲುವೆ ಮೂಲಕ ನೀರು ತಲುಪಿಸಲು ಆಗದೇ ಇರುವ ರೈತರ ಜಮೀನುಗಳಿಗೆ ಹನಿ ನೀರಾವರಿ ಮೂಲಕ ನೀರಾವರಿ ಸೌಲಭ್ಯ ಕಲ್ಪಿಸುವ ಮಹತ್ವದ ಯೋಜನೆ ಇದಾಗಿದೆ.

ಅಂದಾಜು ₹480 ಕೋಟಿ ವೆಚ್ಚದ ಏತ ನೀರಾವರಿ ಯೋಜನೆ ಇದಾಗಿದೆ. ಇದರ ಭಾಗವಾಗಿ ಈಗಾಗಲೇ ಡಂಬಳ ಹೋಬಳಿ ವ್ಯಾಪ್ತಿಯಲ್ಲಿನ ರೈತ ಜಮೀನುಗಳಲ್ಲಿ ಕರ್ನಾಟಕ ನೀರಾವರಿ ನಿಗಮದ ಅಧಿಕಾರಿಗಳು ಹನಿ ನೀರಾವರಿಯ ಪೈಪ್‌ಲೈನ್‌ಗಳನ್ನು ಅಳವಡಿಸಿದ್ದಾರೆ. ಆದರೆ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡುವ ಕಂಪನಿಯೊಂದು ಅದೇ ಜಮೀನುಗಳಲ್ಲಿ (102 ಹೆಕ್ಟೇರ್) ನೀರಾವರಿ ಇಲಾಖೆಯ ಅನುಮತಿ ಪಡೆಯದೇ ಸೋಲಾರ್ ಪ್ಯಾನಲ್ ಅಳವಡಿಕೆ ಮಾಡಲು ಹನಿ ನೀರಾವರಿಯ ಪೈಪ್‌ಲೈನ್‌ಗಳನ್ನು ಸಂಪೂರ್ಣವಾಗಿ ತೆಗೆದು ಹಾಕಿ ಇಲಾಖೆಗೆ ಅಪಾರ ನಷ್ಟ ಉಂಟು ಮಾಡಿದ್ದಾರೆ.



ನೀರಾವರಿ ನಿಗಮ ಪೈಪ್‌ಲೈನ್ ಇರುವ ಹೊಲಗಳಲ್ಲಿಯೇ ಖಾಸಗಿ ಕಂಪನಿ ಸೋಲಾರ್ ಅಳವಡಿಸಿರುವುದು.

ಅನುಮತಿ ಪಡೆದಿಲ್ಲ: ಡಂಬಳ ಹೋಬಳಿ ವ್ಯಾಪ್ತಿಯ 102 ಹೆಕ್ಟೇರ್‌ನಲ್ಲಿ ಎರಡನೇ ಹಂತದ ಯೋಜನೆಯಲ್ಲಿ ಕರ್ನಾಟಕ ನೀರಾವರಿ ನಿಗಮ ಪೈಪ್‌ಲೈನ್ ಅಳವಡಿಸಿದೆ. ಎರಡನೇ ಹಂತದ ಯೋಜನೆ ಮುಕ್ತಾಯಗೊಂಡ ನಂತರ ಪೈಪ್‌ಲೈನ್ ಮೂಲಕ ನೀರು ಪೂರೈಸುವ ಉದ್ದೇಶ ಹೊಂದಲಾಗಿತ್ತು. ಈ ನಡುವೆ ಖಾಸಗಿ ಸೋಲಾರ್ ಕಂಪನಿಯು ಸೋಲಾರ್ ವಿದ್ಯುತ್ ಉತ್ಪಾದನೆಗೆ ಸ್ಥಳಿಯ ಮಧ್ಯಸ್ಥಿಕೆದಾರರಿಂದ ಡಂಬಳ ಹೋಬಳಿ ವ್ಯಾಪ್ತಿಯಲ್ಲಿ 102 ಹೆಕ್ಟೇರ್ ಜಮೀನು ಖರೀದಿಸಿ, ನೀರಾವರಿ ನಿಗಮ ಈಗಾಗಲೇ ಅಳವಡಿಸಿದ್ದ ಪೈಪ್‌ಲೈನ್ ಅನುಮತಿ ಪಡೆಯದೇ ಕಿತ್ತೆಸೆದು ಸೋಲಾರ್ ಅಳವಡಿಸಿದೆ.

ಜಿಲ್ಲಾಡಳಿತವೇ ಕಾರಣ

ಖಾಸಗಿ ಸೋಲಾರ್ ವಿದ್ಯುತ್ ಉತ್ಪಾದನಾ ಕಂಪನಿಗೆ ಈಗಾಗಲೇ ಹನಿ ನೀರಾವರಿ ಸೌಲಭ್ಯ ಹೊಂದಿರುವ ಜಮೀನುಗಳ ಮಾಹಿತಿಯನ್ನು ನೀಡುವ ಮೂಲಕ ಪರೋಕ್ಷವಾಗಿ ಜಿಲ್ಲಾಡಳಿತವೇ ಕಾರಣವಾಗಿದೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿಯೇ ಇದು ಅಂತಿಮವಾಗುತ್ತದೆ. ಆ ಸಂದರ್ಭದಲ್ಲಿ ಮಾಹಿತಿ ನೀಡಬೇಕಾದ ಹಿರಿಯ ಅಧಿಕಾರಿಗಳು ಮಾಡಿದ ತಪ್ಪಿನಿಂದಾಗಿ ನೀರಾವರಿ ಇಲಾಖೆಯ ಅಧಿಕಾರಿಗಳು ಪೇಚಾಡುವಂತಾಗಿದೆ.

ನೋಟಿಸ್‌ಗೂ ಉತ್ತರವಿಲ್ಲ: ಈ ವಿಷಯ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಗಮನಕ್ಕೆ ಬಂದ ನಂತರ ಖಾಸಗಿ ಕಂಪನಿಗೆ ಜನವರಿಯಲ್ಲೇ ನೋಟಿಸ್ ನೀಡಿ ಯೋಜನೆಯನ್ನು ತುರ್ತು ಸ್ಥಗಿತಗೊಳಿಸುವಂತೆ ಸೂಚಿಸಿತ್ತು.

ನೋಟಿಸ್‌ಗೆ ಖಾಸಗಿ ಕಂಪನಿ ಉತ್ತರಿಸದ ಕಾರಣ ಈ ಭಾಗದಲ್ಲಿ ಅಳವಡಿಸಿದ್ದ ಪೈಪ್‌ಲೈನ್ ನಷ್ಟಕ್ಕೆ ₹4.62 ಕೋಟಿ ನಷ್ಟ ಭರಿಸುವಂತೆ ಸೋಲಾರ್ ವಿದ್ಯುತ್ ಕಂಪನಿಗೆ ಪತ್ರ ಬರೆದಿದೆ. ಜಿಲ್ಲೆಯ ಇತರೆ ಭಾಗದಲ್ಲಿ ಯೋಜನೆ ಆರಂಭಿಸುವ ಮುನ್ನ ನೀರಾವರಿ ಇಲಾಖೆಯನ್ನು ಸಂಪರ್ಕಿಸುವಂತೆ ಸೂಚಿಸಿದೆ. ಇದಾವುದಕ್ಕೂ ಖಾಸಗಿ ಸೋಲಾರ್ ಕಂಪನಿ ಪ್ರತಿಕ್ರಿಯೆ ನೀಡದ ಕಾರಣ ಕರ್ನಾಟಕ ನೀರಾವರಿ ನಿಗಮವು ಖಾಸಗಿ ಕಂಪನಿ ವಿರುದ್ಧ ಕಾನೂನು ಸಮರಕ್ಕೆ ಮುಂದಾಗಿದೆ.

> ಮುಂಡರಗಿ ತಾಲೂಕಿನ ಹಲವೆಡೆ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ನಡೆಯುತ್ತಿದೆ. ಇನ್ನೂ ಕಾಮಗಾರಿ ನಡೆಯುತ್ತಿರುವ ಸಂದರ್ಭದಲ್ಲೇ ಸೋಲಾರ್ ವಿದ್ಯುತ್ ಕಂಪನಿ ಅನುಮತಿ ಇಲ್ಲದೇ ಅಳವಡಿಸಿದ ಪೈಪ್‌ಲೈನ್ ಹೊರತೆಗೆದು ಸೋಲಾರ್ ಪ್ಯಾನಲ್ ಅಳವಡಿಸಿದ್ದಾರೆ. ಈಗಾಗಲೇ ಕಂಪನಿಗೆ 102 ಹೆಕ್ಟೇರ್ ವ್ಯಾಪ್ತಿಯಲ್ಲಿ ಆಗಿರುವ ₹4.62 ಕೋಟಿ ನಷ್ಟ ಭರಿಸುವಂತೆ ಪತ್ರ ಬರೆದರೂ ಪ್ರತಿಕ್ರಿಯೆ ನೀಡಿಲ್ಲ. ಕರ್ನಾಟಕ ನೀರಾವರಿ ನಿಗಮದದಿಂದ ಕಂಪನಿಯ ವಿರುದ್ಧ ದಾವೆ ಹೂಡಲು ತೀರ್ಮಾನಿಸಲಾಗಿದೆ.
>
> • **ಐ. ಪ್ರಕಾಶ** ಸಿಂಗಟಾಲೂರು ಏತ ನೀರಾವರಿ, ಇಇ

₹13.88 ಲಕ್ಷ ಮೌಲ್ಯದ ಅಕ್ರಮ ಅಕ್ಕಿ ವಶ

ಗುಜರಾತ್‌ಗೆ ಸಾಗಿಸುತ್ತಿದ್ದ ಅನ್ನಭಾಗ್ಯ ಯೋಜನೆಯ 34.72 ಟನ್ ಅಕ್ಕಿ ಗದುಗಿನಲ್ಲಿ ಜಪ್ತಿ



ಗದಗ ಎಪಿಎಂಸಿ ಆವರಣದಲ್ಲಿರುವ ಆಹಾರ ನಿಗಮದ ಗೋದಾಮಿನಲ್ಲಿ ಗುರುವಾರ ಜಪ್ತಿ ಮಾಡಿದ ಅಕ್ಕಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ್ ಪರಿಶೀಲಿಸಿದರು.

• **ಕನ್ನಡಪ್ರಭ ವಾರ್ತೆ** ಗದಗ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಅನ್ನಭಾಗ್ಯ ಯೋಜನೆಯ ಪಡಿತರ ಅಕ್ಕಿಯನ್ನು ಪಾಲಿಶ್ ಮಾಡಿ ಅಕ್ರಮವಾಗಿ ಗುಜರಾತ್‌ಗೆ ಸಾಗಿಸುತ್ತಿದ್ದ ಬೃಹತ್ ಜಾಲವನ್ನು ಬೆಟಗೇರಿ ಬಡಾವಣೆ ಪೊಲೀಸರು ಭೇದಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಅಂದಾಜು ₹13.88 ಲಕ್ಷ ಮೌಲ್ಯದ 34.72 ಟನ್ ಅಕ್ಕಿ ಹಾಗೂ ಲಾರಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ್ ತಿಳಿಸಿದರು.

ನಗರದ ಎಪಿಎಂಸಿ ಆವರಣದಲ್ಲಿರುವ ಆಹಾರ ನಿಗಮದ ಗೋದಾಮಿನಲ್ಲಿ ಗುರುವಾರ ಜಪ್ತಿ ಮಾಡಿದ ಅಕ್ಕಿಯನ್ನು ಪರಿಶೀಲನೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಬುಧವಾರ ಸಂಜೆ ಗದಗಿನ ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜಿನ ಎದುರು ಅಕ್ಕಿ ತುಂಬಿದ ಲಾರಿಯೊಂದು ಸಂಚರಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಲಭಿಸಿತ್ತು. ಅದರಂತೆ ಬೆಟಗೇರಿ ಬಡಾವಣೆ ಪೊಲೀಸರು ದಾಳಿ ನಡೆಸಿ ಲಾರಿಯನ್ನು ತಡೆದು ತಪಾಸಣೆ ನಡೆಸಿದಾಗ, ಹರಪನಹಳ್ಳಿಯಿಂದ ಗುಜರಾತ್‌ಗೆ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿರುವುದು ಬೆಳಕಿಗೆ ಬಂದಿದೆ.

ಸಾಮಾನ್ಯ ಪಡಿತರ ಅಕ್ಕಿಯನ್ನು ಮೇಲ್ನೋಟಕ್ಕೆ ಗುರುತಿಸಲು ಸಾಧ್ಯವಾಗದಂತೆ ಫ್ಯಾಕ್ಟರಿಯಲ್ಲಿ ಪಾಲಿಶ್ ಮಾಡಲಾಗಿತ್ತು. ಅಲ್ಲದೇ ಇದು ಪಡಿತರ ಅಕ್ಕಿಯಲ್ಲ ಎಂದು ಬಿಂಬಿಸಲು ಆರೋಪಿಗಳು ನಕಲಿ ವೇಬಿಲ್ ಹಾಗೂ ಇತರೆ ದಾಖಲೆಗಳನ್ನು ಸೃಷ್ಟಿಸಿದ್ದರು. ಆದರೆ ಆಹಾರ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿ, ಇದು ಪಡಿತರ ಅಕ್ಕಿ ಎನ್ನುವುದನ್ನು ಖಚಿತಪಡಿಸಿದ ನಂತರ ಆರೋಪಿಗಳನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ಆರಂಭಿಸಿದ್ದೇವೆ ಎಂದರು.

ಈ ಪ್ರಕರಣದಲ್ಲಿ ಒಟ್ಟು 34,720 ಕೆಜಿ ಅಕ್ಕಿಯನ್ನು ವಶಪಡಿಸಿಕೊಂಡಿದ್ದು, ಇದರ ಮಾರುಕಟ್ಟೆ ಮೌಲ್ಯ ಸುಮಾರು ₹13.88 ಲಕ್ಷ. ಅಕ್ಕಿ ಸಾಗಿಸಲು ಬಳಸಿದ ಲಾರಿ ಸೇರಿದಂತೆ ಒಟ್ಟು ₹42.88 ಲಕ್ಷ ಮೌಲ್ಯದ ಸ್ವತ್ತನ್ನು ಜಪ್ತಿ ಮಾಡಲಾಗಿದೆ ಎಂದರು.

ತನಿಖೆ ಚುರುಕು:

ಪ್ರಕರಣಕ್ಕೆ ಸಂಬಂಧಿಸಿದಂತೆ ಲಾರಿ ಚಾಲಕನನ್ನು ವಶಕ್ಕೆ ಪಡೆಯಲಾಗಿದ್ದು, ಈತ ಮಧ್ಯಪ್ರದೇಶ ಮೂಲದವನಾಗಿದ್ದಾನೆ. ಲಾರಿ ಬಾಡಿಗೆಗೆ ಬೇಕೆಂದು ಹೇಳಿ ಈತನನ್ನು ಕರೆಸಿಕೊಳ್ಳಲಾಗಿದೆ ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಅಕ್ಕಿಯನ್ನು ಪಾಲಿಶ್ ಮಾಡಿದ ಫ್ಯಾಕ್ಟರಿ ಮಾಲೀಕರು ಮತ್ತು ನಕಲಿ ಬಿಲ್ ಸೃಷ್ಟಿಸಿದ ಕಿಂಗ್‌ಪಿನ್‌ಗಳ ಪತ್ತೆಗಾಗಿ ವಿಶೇಷ ತಂಡವನ್ನು ರಚಿಸಲಾಗಿದೆ ಎಂದರು.

ಈ ವೇಳೆ ಡಿವೈಎಸ್ಪಿ ಮುರ್ತುಜಾ ಖಾದ್ರಿ ಹಾಗೂ ಆಹಾರ ನಿರೀಕ್ಷಕ ಜಗದೀಶ ಅಮಾತಿ ಉಪಸ್ಥಿತರಿದ್ದರು.

> ಪ್ರಕರಣದಲ್ಲಿ ಒಟ್ಟು 34,720 ಕೆಜಿ ಅಕ್ಕಿಯನ್ನು ವಶಪಡಿಸಿಕೊಂಡಿದ್ದು, ಇದರ ಮಾರುಕಟ್ಟೆ ಮೌಲ್ಯ ಸುಮಾರು ₹13.88 ಲಕ್ಷ. ಅಕ್ಕಿ ಸಾಗಿಸಲು ಬಳಸಿದ ಲಾರಿ ಸೇರಿದಂತೆ ಒಟ್ಟು ₹42.88 ಲಕ್ಷ ಮೌಲ್ಯದ ಸ್ವತ್ತನ್ನು ಜಪ್ತಿ ಮಾಡಲಾಗಿದೆ.
>
> • **ರೋಹನ ಜಗದೀಶ್** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಲಕ್ಕುಂಡಿಯಲ್ಲಿ 2 ಅದ್ಭುತ ಪ್ರಾಚ್ಯಾವಶೇಷ ಪತ್ತೆ



ವಾದ್ಯ ನುಡಿಸುತ್ತಿರುವ ಪುರುಷ ಪ್ರಾಚ್ಯಾವಶೇಷ.



ನೃತ್ಯನಿರತಳಾಗಿ ತ್ರಿಭಂಗಿಯಲ್ಲಿರುವ ಸ್ತ್ರೀಯ ಶಿಲ್ಪ.

• **ಕನ್ನಡಪ್ರಭ ವಾರ್ತೆ** ಗದಗ

ತಾಲೂಕಿನ ಐತಿಹಾಸಿಕ ಸ್ಮಾರಕಗಳ ಬೀಡು ಲಕ್ಕುಂಡಿ ಗ್ರಾಮದ ದುರ್ಗಾದೇವಿ ಕೆರೆಯಲ್ಲಿ ಎರಡು ಹೊಯ್ಸಳ ಕಾಲದ ಪ್ರಾಚ್ಯಾವಶೇಷಗಳು ದೊರೆತಿವೆ.

ಈ ಪ್ರಾಚ್ಯಾವಶೇಷಗಳು ಒಂದು ಸುಂದರವಾದ ಕಲಾತ್ಮಕತೆಯಿಂದ ಕೂಡಿದ ದೇವಾಲಯದ ಬಿಡಿ ಭಾಗಗಳಾಗಿವೆ. ಎರಡು ಭಾಗಗಳಲ್ಲೂ ವಾದ್ಯ ನುಡಿಸುತ್ತಿರುವ ಪುರುಷ ಮತ್ತು ನೃತ್ಯನಿರತ ತ್ರಿಭಂಗಿಯಲ್ಲಿರುವ ಸ್ತ್ರೀಯ ಶಿಲ್ಪಗಳಾಗಿವೆ. ಒಂದು ಶಿಲ್ಪದಲ್ಲಿ ಪುರುಷನು ಮದ್ದಳೆಯನ್ನು ಬಾರಿಸುತ್ತಿದ್ದು, ಅಲಂಕೃತಳಾದ ಸ್ತ್ರೀಯು ನೃತ್ಯ ಮಾಡುತ್ತಿದ್ದರೆ, ಎರಡನೆಯ ಭಾಗದಲ್ಲಿ ಪುರುಷ ವೇಣುವಾದನದಲ್ಲಿ ತಲ್ಲೀನನಾಗಿದ್ದಾನೆ.

ಮಹಿಳೆಯು ನೃತ್ಯ ನಿರತಳಾಗಿ ನೃತ್ಯ ಸಂಗೀತ ಎರಡರಲ್ಲೂ ಪರಿಣತಳು ಎಂಬುದನ್ನು ತಿಳಿಸುತ್ತದೆ. ಈ ಎರಡು ಪ್ರಾಚ್ಯಾವಶೇಷಗಳ ಭಾಗಗಳನ್ನು ಗಮನಿಸಿದಾಗ ಈ ಶಿಲ್ಪಗಳ ಮೇಲೆ ಹೊಯ್ಸಳರ ಶೈಲಿಯ ನಿಚ್ಚಳ ಪ್ರಭಾವವಿರುವುದನ್ನು ಕಾಣಬಹುದು. ಪುರುಷನ ಮೇಲ್ವಸ್ತ್ರ, ಸ್ತ್ರೀಯರ ಉಡುಪು, ಅಲಂಕೃತವಾದ ಕೆತ್ತನೆ ಹೊಂದಿರುವುದಲ್ಲದೆ ವಿಶಿಷ್ಟ ಕೇಶವಿನ್ಯಾಸವನ್ನು ಶಿಲ್ಪಿ ಮೂಡಿಸಿದ್ದಾನೆ. ಇದು ಯಾವುದೋ ಅತ್ಯುತ್ಕೃಷ್ಟ ದೇವಾಲಯದ ಬಿಡಿ ಭಾಗವಾಗಿದೆ ಎಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ.

ಮಕ್ಕಳ ಸಾಹಿತ್ಯ ನಿರ್ಲಕ್ಷ್ಯ ಸಲ್ಲದು: ಡಾ. ರಾಜೇಂದ್ರ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ದತ್ತಿ ಉಪನ್ಯಾಸ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಗದಗ

ಮಕ್ಕಳ ಮನೋವಿಕಾಸಕ್ಕೆ ಸಾಹಿತ್ಯ ಪೂರಕವಾದುದು. ಆದರೆ, ಇಂದು ಮಕ್ಕಳ ಸಾಹಿತ್ಯ ನಿರ್ಲಕ್ಷ್ಯಕ್ಕೆ ಒಳಗಾಗಿದೆ ಎಂದು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಹೇಳಿದರು.

ನಗರದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ ಕಸಾಪ ಕಾರ್ಯಾಲಯದಲ್ಲಿ ಶಿಕ್ಷಕ ದಂಪತಿ ಅನ್ನಪೂರ್ಣಾದೇವಿ ಹಾಗೂ ಸಿದ್ಧಲಿಂಗಯ್ಯ ವಸ್ತ್ರದ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕತೆ, ಹಾಡುಗಳ ಮೂಲಕ ಮಕ್ಕಳ ಕಲಿಕೆ ಮನೆಯಿಂದ ಪ್ರಾರಂಭವಾಗುತ್ತಿತ್ತು. ಮಕ್ಕಳ ಸಾಹಿತ್ಯದ ಮಹತ್ವ ಅರಿತು ಅನೇಕ ಹಿರಿಯ ಸಾಹಿತಿಗಳು ಕೃತಿಗಳನ್ನು ರಚಿಸಿದ್ದಾರೆ ಎಂದರು.

ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಮನೆ, ಶಾಲೆ ಮತ್ತು ಸಮಾಜವು ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಪೂರಕವಾದ ವ್ಯವಸ್ಥೆಯನ್ನು ಪೂರ್ಣ ಪ್ರಮಾಣದಲ್ಲಿ ಕಲ್ಪಿಸಿಲ್ಲ. ಮಕ್ಕಳ ಸಾಹಿತ್ಯವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸರ್ಕಾರ ಪೂರಕ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು.



ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಶಿಕ್ಷಕ, ಸಾಹಿತಿ ಡಾ. ಆರ್.ಎಲ್. ಹಂಸನೂರ ಅವರನ್ನು ಸನ್ಮಾನಿಸಲಾಯಿತು.

ಶಿಕ್ಷಕ, ಸಾಹಿತಿ ಡಾ. ರಾಮಚಂದ್ರ ಹಂಸನೂರ, ಸಾಹಿತಿ ಚಂದ್ರಶೇಖರ ವಸ್ತ್ರದ ಮಾತನಾಡಿದರು. ಈ ವೇಳೆ ಚೆನ್ನಮ್ಮ ವಸ್ತ್ರದ, ಕೆ.ಎಚ್. ಬೇಲೂರ, ಅನ್ನದಾನಿ ಹಿರೇಮಠ, ಸಿ.ಕೆ.ಎಚ್. ಕಡಣಿ ಶಾಸ್ತ್ರಿ, ಅಂದಾನೆಪ್ಪ ವಿಭೂತಿ, ಕ್ಷಮಾ ವಸ್ತ್ರದ, ವಿನಯ ವಸ್ತ್ರದ, ಬಸವರಾಜ ಗಿರಿತಿಮ್ಮಣ್ಣವರ, ಬಿ.ಬಿ. ಹೊಳಗುಂದಿ, ಸಿ.ಎಂ. ಮಾರನಬಸರಿ, ಎಂ.ಎಫ್. ಡೋಣಿ, ರತ್ನಕ್ಕ ಪಾಟೀಲ, ಭಾರತಿ ಕೋಟಿ, ಮೋಹನ ಕೋಟಿ, ಎಸ್.ಯು. ಸಜ್ಜನಶೆಟ್ಟರ, ರಶ್ಮಿ ಅಂಗಡಿ, ಈರಣ್ಣ ಮಣಕವಾಡ, ಅಶೋಕ ಸತ್ಯರೆಡ್ಡಿ, ಅಶೋಕ ಬರಗುಂಡಿ, ಬೂದೇಶ ಮಜ್ಜಿಗುಡ್ಡ, ಡಿ.ಜಿ. ಕುಲಕರ್ಣಿ, ಎಸ್.ಪಿ. ಹೊಂಬಳ, ಜೆ.ಎ. ಪಾಟೀಲ, ರೇಣುಕಾ ಹಂಸನೂರ, ಕಿರಣ ಬಡಿಗೇರ, ಬಸವರಾಜ ವಾರಿ, ಸಮರ್ಥ ಹಂಸನೂರ, ಶೇಖಣ್ಣ ಕಳಸಾಪುರ, ಬೂದಪ್ಪ ಅಂಗಡಿ, ಮಾಲತೇಶಗೌಡ ಪಾಟೀಲ, ಅನಂತ ಭಟ್, ಶಶಿಧರ ರೇಶ್ಮೆ, ಶಿವಾಜಿ ಕಾಂಬಳೇಕರ ಇದ್ದರು.

ಲೋಕಾಯುಕ್ತ ಜನಸಂಪರ್ಕ ಸಭೆ

ಗದಗ: ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಮೇ 13ರಂದು ಬೆಳಗ್ಗೆ 10.30ರಿಂದ ಮಧ್ಯಾಹ್ನ 1ರ ವರೆಗೆ ಪುರಸಭೆ ಕಾರ್ಯಾಲಯ ಲಕ್ಷ್ಮೇಶ್ವರದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ಸ್ವೀಕರಿಸಲಾಗುವುದು.

ಸಾರ್ವಜನಿಕರು, ಸರ್ಕಾರಿ ಕಚೇರಿಗಳಲ್ಲಿ ನಡೆಯುವ ದುರಾಡಳಿತ ಕುರಿತು ಅಂದರೆ, ಸಾರ್ವಜನಿಕ ಕುಂದು-ಕೊರತೆಗಳ ಅಹವಾಲು ಸ್ವೀಕರಿಸುವ ಪ್ರಯುಕ್ತ ಸಭೆ ಕರೆಯಲಾಗಿದ್ದು, ಸಭೆಗೆ ಸರ್ಕಾರದ ಎಲ್ಲ ಕಚೇರಿಗಳ ತಾಲೂಕು ಮಟ್ಟದ ಸರಕಾರಿ ಅಧಿಕಾರಿಗಳು ಹಾಜರಿರುತ್ತಾರೆ, ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಸಲ್ಲಿಸಬಹುದು.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಾಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೌರವಗಳು :

ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 34°c | ಕನಿಷ್ಠ 26°c

ಸುದ್ದಿ ಸಿಂಚನ

ವೀರಸಂಗೊಳ್ಳಿ ರಾಯಣ್ಣ ಸೊಸೈಟಿ ಅಧ್ಯಕ್ಷರಾಗಿ ಸೋಂಪುರ ಆಯ್ಕೆ

ಗಜೇಂದ್ರಗಡ: ಪಟ್ಟಣದ ವೀರಸಂಗೊಳ್ಳಿ ರಾಯಣ್ಣ ಕೋ- ಆಪ್ ಕ್ರೆಡಿಟ್ ಸೊಸೈಟಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಚ್.ಎಸ್.ಸೋಪೂರ, ಉಪಾಧ್ಯಕ್ಷರಾಗಿ ಶರಣಪ್ಪ ರಂಗಣ್ಣವರ ಅವಿರೋಧವಾಗಿ ಆಯ್ಕೆಯಾದರು.

ಕಳೆದ 15 ವರ್ಷಗಳಿಂದ ಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ವೀರಸಂಗೊಳ್ಳಿ ರಾಯಣ್ಣ ಕೋ- ಆಪ್ ಕ್ರೆಡಿಟ್ ಸೊಸೈಟಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳು ಅವಿರೋಧವಾಗಿ ಆಯ್ಕೆಯಾದವು ಎಂದು ಸಹಕಾರ ಕ್ಷೇತ್ರದ ಪ್ರಕಾಶ ಹೊಸೂರ ಘೋಷಿಸಿದರು. ಸಂಘದ ನಿರ್ದೇಶಕರಾದ ಶರಣಪ್ಪ ದೊಣ್ಣೆಗುಡ್ಡ, ಮುತ್ತಣ್ಣ ಕೊಪ್ಪಳ, ಸಿದ್ದಪ್ಪ ಹಳ್ಳದ, ಸಂಗಪ್ಪ ಯಲಿಗಾರ, ಬಸವರಾಜ ಅಗಸಿಮುಂದಿನ, ಬಸವರಾಜ ಗುಳಗುಳಿ, ಭೀಮಪ್ಪ ಜೂಲಗುಡ್ಡ, ಪ್ರಕಾಶ ಚಪ್ಪರದ, ಬಸಮ್ಮ ಕಂಬಳಿ, ದಿವ್ಯಾ ಮಾಸ್ತರ, ಗುಂಡಪ್ಪ ಗುಂಡೆ ಹಾಗೂ ಕಾರ್ಯದರ್ಶಿ ಶಂಕ್ರಪ್ಪ ಜೂಲಗುಡ್ಡ ಸೇರಿದಂತೆ ಇತರರು ಇದ್ದರು.

ಡಿಪ್ಲೊಮಾ ಕೋರ್ಸ್‌ಗೆ ನೇರ ಪ್ರವೇಶಕ್ಕಾಗಿ ಅರ್ಜಿ

ಗದಗ: 2026- 27ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 2ನೇ ವರ್ಷದ ಡಿಪ್ಲೊಮಾ(ಡಿಎಚ್‌ಟಿಟಿ) ಕೋರ್ಸ್ ಪ್ರವೇಶಕ್ಕಾಗಿ 26 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ₹2,500 ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಐಐಎಚ್‌ಟಿ ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು. ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಮೊ. 9916143619 ಕಚೇರಿ ದೂ. 08372- 259664 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

ಮಾರುಕಟ್ಟೆ ಧಾರಣೆ



ಗದಗ

ಉತ್ಪನ್ನ	ಕನಿಷ್ಠ	ಗರಿಷ್ಠ
ಕಡಲೆ	1109	5669
ಉದ್ದಿನಕಾಳು	3009	3009
ಕೊತ್ತಂಬರಿ ಬೀಜ	3519	3519
ಹತ್ತಿ	7250	7300
ಅಲಸಂದೆ	1219	5869
ಹೆಸರು	1877	5590
ಗೆಜ್ಜೆ ಶೇಂಗಾ	4420	6924
ಹುರುಳಿ ಕಾಳು	2812	2812
ಜೋಳ	2569	4221
ಮೆಕ್ಕೆಜೋಳ	1417	1851
ನವಣೆ	2744	2744
ಕುಸುಬೆ	4100	5326
ಸೂರ್ಯಕಾಂತಿ	6182	6672
ತೊಗರಿ	4312	4312
ಗೋದಿ	1414	4868



ಗಜೇಂದ್ರಗಡದ ವೀರಸಂಗೊಳ್ಳಿ ರಾಯಣ್ಣ ಕೋ- ಆಪ್ ಕ್ರೆಡಿಟ್ ಸೊಸೈಟಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಚ್.ಎಸ್.ಸೋಪೂರ, ಉಪಾಧ್ಯಕ್ಷರಾಗಿ ಶರಣಪ್ಪ ರಂಗಣ್ಣವರ ಅವಿರೋಧವಾಗಿ ಆಯ್ಕೆಯಾದರು.



ನರೇಗಲ್ಲಿನ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ 2025- 26ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿನಿಯರನ್ನು ಆಡಳಿತ ಮಂಡಳಿ ಹಾಗೂ ಶಾಲಾ ಸಿಬ್ಬಂದಿ ಸನ್ಮಾನಿಸಿದರು.

ಎಸ್ಸೆಸ್ಸೆಲ್ಸಿಯಲ್ಲಿ ಸಾಧನೆಗೈದ ವಿದ್ಯಾರ್ಥಿನಿಯರಿಗೆ ಸನ್ಮಾನ

• **ಕನ್ನಡಪ್ರಭ ವಾರ್ತೆ** ನರೇಗಲ್ಲ

ಪಟ್ಟಣದ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ 2025- 26ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿನಿಯರನ್ನು ಆಡಳಿತ ಮಂಡಳಿ ಹಾಗೂ ಶಾಲಾ ಸಿಬ್ಬಂದಿ ಸನ್ಮಾನಿಸಿದರು.

ಈ ವೇಳೆ ಕೋಡಿಕೊಪ್ಪದ ಭಾರತಿ ರವಿ ಕುಂಬಾರ ಅವರು ಪ್ರಥಮ ಪಿಯುಸಿ ವಿಜ್ಞಾನ ವಿಭಾಗಕ್ಕೆ ಸೇರುವ ವಿದ್ಯಾರ್ಥಿನಿಯರಿಗೆ ಉಚಿತವಾಗಿ ವಿಜ್ಞಾನ ಪಠ್ಯಪುಸ್ತಕಗಳು ಹಾಗೂ ಕಲಿಕಾ ಕಿಟ್ ವಿತರಿಸಿ ಪ್ರೋತ್ಸಾಹಿಸಿದರು.

ಅಧ್ಯಕ್ಷತೆಯನ್ನು ಎಂ.ಪಿ. ತಳಬಾಳ ವಹಿಸಿದ್ದರು. ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತ ಮಂಡಳಿ ಸದಸ್ಯ ನಿಂಗನಗೌಡ ಲಕ್ಕನಗೌಡ್ರ, ಮುಖ್ಯೋಪಾಧ್ಯಾಯ ಎಸ್.ಎನ್. ಹೂಲಗೇರಿ, ಎ.ಟಿ. ಮಳ್ಳಳ್ಳಿ, ಬಿ.ಡಿ. ಯರಗೊಪ್ಪ, ಎಂ.ಎಸ್. ಅತ್ತಾರ, ಎಸ್. ಶಿವಮೂರ್ತಿ, ಎಸ್.ಎಫ್. ಧರ್ಮಾಯತ, ವಿ.ಕೆ. ಚುಳಕಿ, ಎಸ್.ಬಿ. ಕುರಡಗಿ ಹಾಗೂ ಬಸಮ್ಮ ಅಸುಂಡಿ ಇದ್ದರು.

ಪರಿಸರಪ್ರೇಮಿಗಳ ವಿರೋಧದ ನಡುವೆ ಮರಗಳಿಗೆ ಕೊಡಲಿ!

ರಸ್ತೆಬದಿಯ 45 ಮರಗಳ ರೆಂಬೆ, 15 ಮರ ಸಂಪೂರ್ಣ ತೆರವು ಕಾರ್ಯ



ಗದಗ-ಮುಳಗುಂದ ರಸ್ತೆ ಬದಿಯ ಮರಗಳ ರಂಬೆ- ಕೊಂಬೆಗಳನ್ನು ಕತ್ತರಿಸುತ್ತಿರುವುದು.

• **ಮಹೇಶ ಛಬ್ಬಿ**
ಕನ್ನಡಪ್ರಭ ವಾರ್ತೆ ಗದಗ

ಗದಗ- ಮುಳಗುಂದ ರಸ್ತೆಬದಿಯ ಮರಗಳನ್ನು ತೆರವುಗೊಳಿಸದಂತೆ ಸಾರ್ವಜನಿಕರು, ಪರಿಸರಪ್ರೇಮಿಗಳು ಆಕ್ಷೇಪಣೆ ಸಲ್ಲಿಸಿ ಗೋಗರೆದರೂ ಅರಣ್ಯ ಇಲಾಖೆ ಮಾತ್ರ ಮರಗಳ ತೆರವು ಕಾರ್ಯ ನಡೆಸಿದ್ದು ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ.

ವಾಹನಗಳ ಸಂಚಾರಕ್ಕೆ ತೊಂದರೆ ಆಗುತ್ತಿವೆ ಎನ್ನುವ ಕಾರಣಕ್ಕೆ ಗದಗ- ಮುಳಗುಂದ ನಡುವಿನ ರಸ್ತೆ ಅಕ್ಕಪಕ್ಕದಲ್ಲಿರುವ ರಸ್ತೆ ಬದಿಯೇ ಸುಮಾರು 45 ಮರಗಳ ರೆಂಬೆ ಕೊಂಬೆ ಕತ್ತರಿಸಲು ಹಾಗೂ 15 ಮರಗಳನ್ನು ಸಂಪೂರ್ಣ ತೆರವು ಕಾರ್ಯವನ್ನು ಅರಣ್ಯ ಇಲಾಖೆ ಕೈಗೊಂಡಿದ್ದು, ಪರಿಸರಪ್ರೇಮಿಗಳಲ್ಲಿ ಆತಂಕ ಮೂಡಿಸಿದೆ.

ನೂರಾರು ವರ್ಷಗಳಿಂದ ರಸ್ತೆಯ ಸೌಂದರ್ಯ ಹೆಚ್ಚಿಸಿ, ದಣಿದವರಿಗೆ, ವಾಹನ ಸವಾರರಿಗೆ ನೆರಳು ನೀಡಿ, ಜೀವ ಸಂಕುಲಗಳಿಗೆ ಆಶ್ರಯ ನೀಡಿದ ಮರಗಳನ್ನು ತೆರವುಗೊಳಿಸಲು ಮಾ. 13ರ ವರೆಗೆ ಈ ಬಗ್ಗೆ ಸಾರ್ವಜನಿಕರ ಆಕ್ಷೇಪಣೆ ಇದ್ದಲ್ಲಿ ಸಲ್ಲಿಸಲು ಸೂಚನೆ ನೀಡಲಾಗಿತ್ತು.

ಈ ಬಗ್ಗೆ ಆಕ್ಷೇಪಣೆಗಳು ಅರಣ್ಯ ಇಲಾಖೆಗೆ ಸಲ್ಲಿಕೆಯಾಗಿದ್ದು, ಅದಕ್ಕೆ ಉತ್ತರ ಈವರೆಗೂ ನೀಡಿಲ್ಲ. ಆದರೆ ಮರಗಳ ರೆಂಬೆ ಕೊಂಬೆಗಳನ್ನು ಕತ್ತರಿಸುತ್ತಿದ್ದಾರೆ. ಹೀಗಿದ್ದಲ್ಲಿ ಸಾರ್ವಜನಿಕರ ಅಭಿಪ್ರಾಯವನ್ನಾದರೂ ಏಕೆ ಕೇಳಿದರು? ಅದಕ್ಕೆ ಉತ್ತರ ನೀಡದೇ ಅರಣ್ಯ ಇಲಾಖೆ ಮರಗಳ ತೆರವು ಕಾರ್ಯ ನಡೆಸಿದೆ. ಆಕ್ಷೇಪಣೆ ಅರ್ಜಿಗಳಿಗೆ ಯಾವುದೇ ರೀತಿಯ ಮೌಲ್ಯವೇ ಇಲ್ಲ. ಅಲ್ಲದೇ ಮರಗಳ ತೆರವಿಗೆ ಸಾರ್ವಜನಿಕ ವಲಯದಲ್ಲಿ ನಿಗದಿತ ಅವಧಿಯೊಳಗೆ ಆಕ್ಷೇಪಣೆ ಸಲ್ಲಿಕೆಯಾದಲ್ಲಿ ತೆರವು ಕಾರ್ಯ ಸ್ಥಗಿತಗೊಳಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದರು. ಆದರೆ ಏಕಾಏಕಿ ಮರಗಳನ್ನು ತೆರವುಗೊಳಿಸುತ್ತಿರುವುದು ಏಕೆ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ.

ಇತ್ತೀಚೆಗೆ ರಸ್ತೆ ಅಭಿವೃದ್ಧಿ ಕಾರ್ಯ ಪೂರ್ಣಗೊಂಡಿದೆ. ಕಾಮಗಾರಿ ಕೈಗೊಳ್ಳುವ ಮುನ್ನವೇ ಲೋಕೋಪಯೋಗಿ ಇಲಾಖೆ ರಸ್ತೆಗೆ ಅಡ್ಡಬರುವ ಮರಗಳ ತೆರವು ಕೈಗೊಳ್ಳದೇ ಹಾಗೆ ಬಿಟ್ಟಿದೆ. ರಸ್ತೆ ಅಭಿವೃದ್ಧಿಯಾದ ನಂತರ ಮರಗಳ ತೆರವು ಕಾರ್ಯ ನಡೆಸಿದ್ದು, ಜನತೆಗೆ ಅಚ್ಚರಿ ಮೂಡಿಸಿದೆ.

ಹಲವು ವರ್ಷಗಳಿಂದ ರಸ್ತೆಯ ಎರಡೂ ಬದಿಯಲ್ಲಿ ಸಮೃದ್ಧವಾಗಿ ಬೆಳೆದು ನಿಂತಿರುವ ಹುಣಸೆ ಹಾಗೂ ಬೇವಿನ ಮರಗಳು ರಸ್ತೆಯ ಸೌಂದರ್ಯಕ್ಕೆ ಕಾರಣವಾಗಿದೆ. ಅಲ್ಲದೆ ರಸ್ತೆಬದಿಗಳಲ್ಲಿ 250ಕ್ಕೂ ಹೆಚ್ಚು ಮರಗಳಿವೆ. ಇವು ವಾಹನ ಸವಾರರಿಗೆ ಆಹ್ಲಾದಕರ ವಾತಾವರಣ ಅನುಭವ ನೀಡುತ್ತಿದೆ. ಹೀಗಿದ್ದರೂ ಮರಗಳ ತೆರವಿಗೆ ಅರಣ್ಯ ಇಲಾಖೆ ಮುಂದಾಗಿದೆ.

> ಗದಗ- ಮುಳಗುಂದ ರಸ್ತೆಯ ಅಕ್ಕಪಕ್ಕದ ಮರಗಳನ್ನು ತೆರವುಗೊಳಿಸದಂತೆ ಆಕ್ಷೇಪಣೆ ಸಲ್ಲಿಸಿದ್ದೇವು. ಆದರೆ ಅದಕ್ಕೆ ಉತ್ತರ ನೀಡದೆ ಮರಗಳನ್ನು ಅರಣ್ಯ ಇಲಾಖೆ ತೆರವುಗೊಳಿಸುತ್ತಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳನ್ನು ಕೇಳಿದರೆ ಮೇಲಧಿಕಾರಿಗಳು ಎಲ್ಲ ಸೇರಿ ತೀರ್ಮಾನ ತೆಗೆದುಕೊಂಡು ಮರ ತೆರವು ಕಾರ್ಯಕ್ಕೆ ಮುಂದಾಗಿದ್ದೇವೆ ಎಂದು ಉತ್ತರ ನೀಡಿದ್ದಾರೆ. ಈ ಬಗ್ಗೆ ಪರಿಶೀಲಿಸಿ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು.
> • **ಬಸವರಾಜ ರಾಮರೆಡ್ಡಿ** ಪರಿಸರಪ್ರೇಮಿ

> ಮರಗಳನ್ನು ತೆರವುಗೊಳಿಸದಂತೆ ಆಕ್ಷೇಪಣೆಗಳು ಕಡಿಮೆ ಬಂದಿದ್ದು, ಅದೇ ರೀತಿ ರೈತರು, ಸಾರ್ವಜನಿಕರು, ಪಂಚಾಯಿತಿಯವರು ಮರಗಳಿಂದ ತೊಂದರೆಯಾಗುತ್ತದೆ ಎಂದು ಮರಗಳನ್ನು ತೆರವುಗೊಳಿಸುವಂತೆ ಹೆಚ್ಚು ಅರ್ಜಿಗಳು ಬಂದಿದ್ದವು. ಅವುಗಳನ್ನು ಪರಿಶೀಲಿಸಿ ಮೇಲಧಿಕಾರಿಗಳಿಗೆ ಸಲ್ಲಿಸಿದ್ದೇವು. ಎಲ್ಲ ಅರ್ಜಿಗಳನ್ನು ಪರಿಶೀಲಿಸಿ ಅದರ ಪ್ರಕಾರ 45 ಮರಗಳ ರೆಂಬೆ- ಕೊಂಬೆ, 15 ಮರಗಳ ಸಂಪೂರ್ಣ ತೆರವುಗೊಳಿಸಲು ಮೇಲಧಿಕಾರಿಗಳು ಪರವಾನಗಿ ನೀಡಿದ್ದಾರೆ.
> • **ಮಹಾಂತೇಶ ಪಾಟೀಲ** ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ

ಪವನ ವಿದ್ಯುತ್ ಕಂ ಒತ್ತಡ?: ಮುಳಗುಂದ ವ್ಯಾಪ್ತಿಯ ರೈತರ ಹೊಲಗಳಲ್ಲಿ ಪವನ ವಿದ್ಯುತ್ ಕಂಪನಿ ಫ್ಯಾನ್‌ಗಳ ಅಳವಡಿಕೆ ಕೆಲಸ ಪ್ರಾರಂಭಿಸಿದ್ದು, ಅದಕ್ಕೆ ಸಂಬಂಧಿಸಿದ ಸಲಕರಣೆಗಳು ಬೃಹತ್ ವಾಹನಗಳಲ್ಲಿ ಇದೇ ಮಾರ್ಗದಲ್ಲಿಯೇ ಓಡಾಡುತ್ತಿವೆ. ಅವುಗಳ ಸಂಚಾರಕ್ಕೆ ಅಡಚಣೆಯುಂಟಾಗುತ್ತದೆ ಎನ್ನುವ ಕಾರಣದಿಂದ ಪವನ ವಿದ್ಯುತ್ ಕಂ. ಒತ್ತಡಕ್ಕೆ ಮಣಿದು ಮರಗಳ ತೆರವಿಗೆ ಮುಂದಾಗಿದ್ದಾರೆಯೇ ಎನ್ನುವ ಅನುಮಾನವಿದೆ ಎನ್ನುತ್ತಾರೆ ಸ್ಥಳೀಯರು.

ಕೊಳಚೆ ಮಧ್ಯೆ ಕುಡಿವ ನೀರಿನ ಪೈಪ್: ಆಕ್ರೋಶ

ಚರಂಡಿ ನೀರು ಪೈಪ್‌ಗೆ ಸೇರಿ ರೋಗ ಹರಡುವ ಆತಂಕ



ಚರಂಡಿ ಕೊಳಚೆ ನೀರಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಇರುವುದು.

• **ಕನ್ನಡಪ್ರಭ ವಾರ್ತೆ** ಗದಗ

ನಗರದ ಹೃದಯ ಭಾಗದಲ್ಲಿರುವ ಜವಳಿ ಗಲ್ಲಿಯ ರಾಜಕಾಲುವೆಯು ನಾಗರಿಕರ ಪಾಲಿಗೆ ಮೃತ್ಯುಕೂಪವಾಗಿ ಮಾರ್ಪಟ್ಟಿದೆ. ಒಂದೆಡೆ ಚರಂಡಿ ನೀರಿನಲ್ಲೇ ಕುಡಿಯುವ ನೀರಿನ ಪೈಪ್‌ಲೈನ್ ಹರಿಯುತ್ತಿದ್ದರೆ, ಮತ್ತೊಂದೆಡೆ ಮುಖ್ಯ ರಸ್ತೆಯೇ ಕುಸಿಯುವ ಹಂತದಲ್ಲಿದ್ದರೂ ಅಧಿಕಾರಿಗಳು ಕಣ್ಣುಮುಚ್ಚಿ ಕುಳಿತಿರುವುದು ದುರ್ದೈವದ ಸಂಗತಿ.

ತುಂಗಭದ್ರಾ ನದಿಯಿಂದ ಸರಬರಾಜಾಗುವ ಕುಡಿಯುವ ನೀರಿನ ಪೈಪ್‌ಲೈನ್ ಅನ್ನು ಜವಳಿಗಲ್ಲಿಯ ರಾಜಕಾಲುವೆಯ ಕೊಳಚೆಯಲ್ಲೇ ಇದೆ. ಈ ಪೈಪ್ ಮೇಲೆ ಟನ್‌ಗಟ್ಟಲೆ ಪ್ಲಾಸ್ಟಿಕ್ ಹಾಗೂ ಘನತ್ಯಾಜ್ಯ ಹೂತು ಹೋಗಿದೆ. ಪೈಪ್‌ನಲ್ಲಿ ಸಣ್ಣ ಬಿರುಕು ಕಂಡುಬಂದರೂ ವಿಷಕಾರಿ ಚರಂಡಿ ನೀರು ನೇರವಾಗಿ ಡೋರಗಲ್ಲಿ, ಹೊಂಬಳನಾಕಾ, ಜನತಾ ಕಾಲನಿ, ಮ್ಯಾಗೇರಿ ಓಣಿ ಮತ್ತು ಅಂಬೇಡ್ಕರ್‌ನಗರದ ನಿವಾಸಿಗಳ ಹೊಟ್ಟೆ ಸೇರುತ್ತದೆ. ಇದು ಕಾಲರಾ, ಟೈಫಾಯಿಡನಂಥ ರೋಗಗಳಿಗೆ ಮುಕ್ತ ಆಹ್ವಾನ ನೀಡಿದಂತಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಕಾಲುವೆಯ ಪಕ್ಕದಲ್ಲೇ ಕೋಳಿ ಮಾರುಕಟ್ಟೆ ಇದ್ದು, ಅಲ್ಲಿನ ತ್ಯಾಜ್ಯವನ್ನು(ಕೊಳೆತ ಮಾಂಸ ಮತ್ತು ರಕ್ತ) ನೇರವಾಗಿ ಕುಡಿಯುವ ನೀರಿನ ಪೈಪ್‌ಲೈನ್ ಮೇಲೆಯೇ ಎಸೆಯಲಾಗುತ್ತಿದೆ. ಇದರಿಂದ ಇಡೀ ಪ್ರದೇಶ ನರಕಸದೃಶವಾಗಿದ್ದು, ದುರ್ವಾಸನೆಯಿಂದಾಗಿ ಜನರು ಮೂಗು ಮುಚ್ಚಿಕೊಂಡು ಓಡಾಡುವಂತಾಗಿದೆ.

ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ನೀರು ವಿಷಪೂರಿತವಾಗುತ್ತಿದೆ. ರಾಜಕಾಲುವೆಯ ಪಕ್ಕದಲ್ಲಿರುವ ಮುಖ್ಯ ಸಿಸಿ ರಸ್ತೆಯ ಅಡಿಭಾಗದ ಮಣ್ಣು ಕೊಚ್ಚಿ ಹೋಗಿದ್ದು, ರಸ್ತೆ ಯಾವಾಗ ಕುಸಿಯುತ್ತದೆಯೋ ಎಂಬ ಆತಂಕ ಮೂಡಿದೆ.

> ರಾಜಕಾಲುವೆಯ ಕೊಳಚೆ ಮತ್ತು ಕೋಳಿ ಮಾಂಸದ ತ್ಯಾಜ್ಯದ ರಾಶಿಯಲ್ಲೇ ಕುಡಿಯುವ ನೀರಿನ ಪೈಪ್‌ಲೈನ್ ಹೂತು ಹೋಗಿರುವುದು ನಾಗರಿಕ ಸಮಾಜ ತಲೆತಗ್ಗಿಸುವಂತಿದೆ. ಇತ್ತ ಸಿಸಿ ರಸ್ತೆಯೂ ಅಡಿಪಾಯವಿಲ್ಲದೆ ಕುಸಿಯುವ ಹಂತದಲ್ಲಿದೆ. ಕೂಡಲೇ ಪೈಪ್‌ಲೈನ್ ಸ್ಥಳಾಂತರಿಸಿ, ರಸ್ತೆ ದುರಸ್ತಿ ಮಾಡಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಅನಿವಾರ್ಯ.
> • **ಕೃಷ್ಣ ಎಚ್. ಹಡಪದ** ಸಾಮಾಜಿಕ ಕಾರ್ಯಕರ್ತರು

ಹೇಮರಡ್ಡಿ ಮಲ್ಲಮ್ಮ ಜಯಂತಿ ಇಂದು

ರೋಣ: ಶಿವಶರಣೆ ಹೇಮರಡ್ಡಿ ಮಲ್ಲಮ್ಮ ನೂತನ ದೇವಸ್ಥಾನದ ಅಡಿಗಲ್ಲು ಸಮಾರಂಭ ಹಾಗೂ ಜಯಂತ್ಯುತ್ಸವ ಕಾರ್ಯಕ್ರಮ ಮೇ 8ರಂದು ಬೆಳಗ್ಗೆ 10.30 ಗಂಟೆಗೆ ಪಟ್ಟಣದ ಗುರುಭವನದಲ್ಲಿ ಜರುಗಲಿದೆ.

ಬೆಳಗ್ಗೆ 9.30ಕ್ಕೆ ಹುಬ್ಬಳ್ಳಿ ರಸ್ತೆಯಲ್ಲಿನ ಡಿಪೌಲ ಶಾಲೆ ಹತ್ತಿರ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ನೂತನ ದೇವಸ್ಥಾನ ನಿರ್ಮಾಣ ಕಾಮಗಾರಿ ಅಡಿಗಲ್ಲು ನೆರವೇರಲಿದೆ. ಸಾನ್ನಿಧ್ಯವನ್ನು ಶಿರಹಟ್ಟಿ ಫಕೀರ ದಿಂಗಾಲೇಶ್ವರ ಸ್ವಾಮೀಜಿ, ಅಬ್ಬಿಗೇರಿ ಮುಗಳಕೋಡ ಯಲ್ಲಾಲಿಂಗೇಶ್ವರ ಶಾಖಾ ಮಠದ ಬಸವರಾಜ ಶರಣರು ವಹಿಸುವರು.

ಅಧ್ಯಕ್ಷತೆಯನ್ನು ಮಾಜಿ ಸಂಸದ ಆರ್. ಎಸ್. ಪಾಟೀಲ ವಹಿಸುವರು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯ ಉಪಾಧ್ಯಕ್ಷ ಅಮರೇಗೌಡ ಬಯ್ಯಾಪೂರ, ಕರ್ನಾಟಕ ರಾಜ್ಯ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ವೀರಶೈವ ಲಿಂಗಾಯತ ರಡ್ಡಿ ಸಮಾಜ ರಾಜ್ಯಾಧ್ಯಕ್ಷ ಶೇಖರಗೌಡ ಮಾಲೀಪಾಟೀಲ, ಶಾಸಕ ಜಿ.ಎಸ್. ಪಾಟೀಲ, ರಡ್ಡಿ ಸಮಾಜದ ದಾವಣಗೆರೆ ಜಿಲ್ಲಾಧ್ಯಕ್ಷ ಡಾ. ಕೊಟ್ರೇಶ ಬಿದ್ರಿ, ಧಾರವಾಡ ಜಿಲ್ಲಾಧ್ಯಕ್ಷ ರಘುನಾಥಗೌಡ ಕೆಂಪಲಿಂಗನಗೌಡ್ರ, ಫಕೀರಪ್ಪ ತಟ್ಟಿಮನಿ, ಶರಣಗೌಡ ಪಾಟೀಲ ಸರ್ಜಾಪೂರ, ಅನೀಲಕುಮಾರ ತೆಗ್ಗಿನಮನಿ, ಕುಬೇರಪ್ಪ ಗಡಗಿ, ಭೀಮರಡ್ಡಿ ರಡ್ಡೇರ, ಅಶೋಕ ಗಡಗಿ ಮುಂತಾದವರು ಉಪಸ್ಥಿತರಿರುವರು ಎಂದು ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸದ್ಬೀಧನಾ ಪೀಠ ರೋಣ ತಾಲೂಕು ಘಟಕ ಪ್ರಕಟಣೆಯಲ್ಲಿ ತಿಳಿಸಿದೆ.

ಅಡ್ಡಪಲ್ಲಕ್ಕಿ ಮಹೋತ್ಸವ, ನೂತನ ರಥ ಲೋಕಾರ್ಪಣೆ

• **ಕನ್ನಡಪ್ರಭ ವಾರ್ತೆ** ಗಜೇಂದ್ರಗಡ

ತಾಲೂಕಿನ ಸೂಡಿ ಗ್ರಾಮದಲ್ಲಿ ಗುರುವಾರ ವೀರಶೈವ ಧರ್ಮಪೀಠದ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ 50ನೇ ವರ್ಷದ ರಥೋತ್ಸವದ ನಿಮಿತ್ತವಾಗಿ ನೂತನ ರಥ ಲೋಕಾರ್ಪಣೆ ಹಾಗೂ ಧರ್ಮ ಸಮಾರಂಭ ನಡೆಯಿತು.

ಈ ವೇಳೆ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿದರು. ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು, ಜುಕ್ತಿಹಿರೇಮಠ, ಸೂಡಿ, ವೀರೇಶ್ವರ ಶಿವಾಚಾರ್ಯ ಸ್ವಾಮಿಗಳು, ಹಿರೇಮಠ, ಹಿರೇವಡ್ಡಟ್ಟಿ, ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ, ಪಂಚಗ್ರಹ ಹಿರೇಮಠ, ಸುಳ್ಯ, ಕರಿಬಸವ ಶಿವಾಚಾರ್ಯ ಸ್ವಾಮೀಜಿ, ಮದ್ದಾನಿ ಹಿರೇಮಠ, ಕುಷ್ಟಗಿ, ಮಲ್ಲಿಕಾರ್ಜುನ ಸ್ವಾಮೀಜಿ, ಟೆಂಗಿನಮಠ, ಬಾಗಲಕೋಟೆ, ಡಾ. ಭೀಮೇಶ್ವರ ಜೋಶಿ, ಧರ್ಮಕರ್ತರು, ಅನ್ನಪೂರ್ಣೇಶ್ವರಿ ದೇವಸ್ಥಾನ ಹೊರನಾಡು ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಶಾಸಕ ಜಿ.ಎಸ್. ಪಾಟೀಲ್, ಮಾಜಿ ಶಾಸಕ ಕಳಕಪ್ಪ ಬಂಡಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಸೇರಿದಂತೆ ಅಪಾರ ಭಕ್ತರು ಇದ್ದರು.



ಅಡ್ಡಪಲ್ಲಕ್ಕಿ ಮಹೋತ್ಸವ, ನೂತನ ರಥ ಲೋಕಾರ್ಪಣೆ ಕಾರ್ಯಕ್ರಮ ನಡೆಯಿತು.

ಅಭಿಪ್ರಾಯ...

ಪಕ್ಷಿಗಳಿಗೆ ನೀರಿನ ತೊಟ್ಟಿ ಇಡುವ ಕಾರ್ಯಕ್ರಮದಲ್ಲಿ ಈಶ್ವರಪ್ಪ ಹಂಚಿನಾಳ

ಪ್ರಾಣಿ- ಪಕ್ಷಿ ನಿರ್ಲಕ್ಷಿಸಿದರೆ ಪರಿಸರ ನಾಶ ಕಟ್ಟಿಟ್ಟ ಬುತ್ತಿ

• **ಕನ್ನಡಪ್ರಭ ವಾರ್ತೆ** ಮುಂಡರಗಿ

ಮನುಷ್ಯ ಪ್ರಾಣಿ- ಪಕ್ಷಿಗಳನ್ನು ನಿರ್ಲಕ್ಷ್ಯ ಮಾಡಿದರೆ ಪರಿಸರ ಸಮತೋಲನವನ್ನು ಕಳೆದುಕೊಂಡು ಹಾನಿ ಅನುಭವಿಸಬೇಕಾಗುತ್ತದೆ. ವಿದ್ಯಾರ್ಥಿಗಳು ಬೇಸಿಗೆಯ ಕಾಲದಲ್ಲಿ ತಮ್ಮ ಮನೆಯ ಮಾಳಿಗೆಯ ಮೇಲೆ ಮತ್ತು ಮನೆಯಂಗಳದಲ್ಲಿ ಪ್ರಾಣಿ, ಪಕ್ಷಿಗಳಿಗಾಗಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಕೃಷಿ ಪಂಡಿತ ಪ್ರಶಸ್ತಿ ಪುರಸ್ಕತ ಈಶ್ವರಪ್ಪ ಹಂಚಿನಾಳ ಮನವಿ ಮಾಡಿದರು.

ಇಲ್ಲಿನ ಸ್ವಾಮಿ ವಿವೇಕಾನಂದ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಆವರಣದಲ್ಲಿರುವ 60ಕ್ಕೂ ಹೆಚ್ಚು ಮರಗಳಿಗೆ ಗುರುವಾರ ನೀರಿನ ತೊಟ್ಟಿಗಳನ್ನು ಕಟ್ಟಿ, ಪಕ್ಷಿಗಳಿಗೆ ಕಾಳುಗಳನ್ನು ಚೆಲ್ಲುವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮನುಷ್ಯ ನಿಸರ್ಗದ ಮೇಲೆ ಅವಲಂಬಿತವಾದ ಪ್ರಾಣಿ. ನಿಸರ್ಗದಲ್ಲಿ ಮರ ಗಿಡಗಳನ್ನು ಹೆಚ್ಚು-ಹೆಚ್ಚು ಬೆಳೆಸುವುದರೊಂದಿಗೆ ಪ್ರಾಣಿ-ಪಕ್ಷಿಗಳ ಉಳಿವಿಗಾಗಿ ಶ್ರಮಿಸಬೇಕು. ಬೇಸಿಗೆಯಲ್ಲಿ ಅವು ನೀರು ಮತ್ತು ಆಹಾರವಿಲ್ಲದೆ ಸಂಕಷ್ಟದಲ್ಲಿ ಸಿಲುಕುತ್ತವೆ.

ಹೀಗಾಗಿ ಸಾಧ್ಯವಾದ ಕಡೆ ನೀರಿನ ತೊಟ್ಟಿಗಳನ್ನು ಇಟ್ಟು, ಕಾಳುಗಳನ್ನು ಹಾಕಿ ಪ್ರಾಣಿ- ಪಕ್ಷಿಗಳ ಸಂಕುಲಗಳನ್ನು ಉಳಿಸುವ ಮಾನವೀಯ ಕೆಲಸವನ್ನು ಮಾಡಬೇಕು ಎಂದರು.

ಸಿಂಗಟಾಲೂರು ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಕರಬಸಪ್ಪ ಹಂಚಿನಾಳ ಅವರು ತೊಟ್ಟಿಗಳಿಗೆ ನೀರು ಮತ್ತು ಮರಗಳ ಬುಡದಲ್ಲಿ ಆಹಾರದ ಧಾನ್ಯ ಹಾಕಿ ಕಾರ್ಯಕ್ರಮ ಉದ್ಘಾಟಿಸಿದರು.

ಮಾಜಿ ಸೈನಿಕ ಶೇಖರಗೌಡ ಪಾಟೀಲ ಮಾತನಾಡಿ, ಮಕ್ಕಳಲ್ಲಿ ಪರಿಸರ ಸಂರಕ್ಷಣೆಯ ಕಾಳಜಿ ಇಲ್ಲದಿರುವುದು ವಿಷಾದದ ಸಂಗತಿ. ಪ್ರಾಣಿ- ಪಕ್ಷಿಗಳು ಪರಿಸರಕ್ಕೆ ಹಾನಿಯನ್ನು ಮಾಡುವುದಿಲ್ಲ. ಮನುಷ್ಯ ಪ್ರಾಣಿಯೇ ಪರಿಸರಕ್ಕೆ ಹಾನಿಯನ್ನುಂಟು ಮಾಡುವ ಪ್ರಾಣಿ. ಮನುಷ್ಯರು ಪರಿಸರಕ್ಕೆ ಪೂರಕ ಕಾರ್ಯ ಮಾಡಬೇಕೇ ವಿನಾ ಹಾನಿಯಾಗುವ ಕಾರ್ಯ ಮಾಡಬಾರದು ಎಂದರು.

ಸಂಸ್ಥೆಯ ಆಡಳಿತಾಧಿಕಾರಿ ಸಿ.ಎಸ್. ಅರಸನಾಳ ಮಾತನಾಡಿ, ಬೇಸಿಗೆಯ ಸಮಯದಲ್ಲಿ ನಮಗೆ ಅನುಕೂಲವಾದ ಕಡೆ ಪ್ರಾಣಿ-ಪಕ್ಷಿಗಳಿಗೆ ಕುಡಿಯಲು ನೀರನ್ನು ಒದಗಿಸುವ ಕಾರ್ಯ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ದೇವಪ್ಪ ಇಟಗಿ, ಪತ್ರಕರ್ತರಾದ ಶರಣು ಸೊಲಗಿ, ಸಿ.ಕೆ. ಗಣಪ್ಪನವರ, ಶಾಲಾ ಪ್ರಧಾನ ಗುರು ಪರಮೇಶ ನಾಯಕ, ಬಿ.ಡಿ. ನದಾಫ್, ಜೆ.ಎಂ. ಜಿಂದೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಪ್ರೌಢಶಾಲಾ ಮುಖ್ಯೋಪಾಧ್ಯಾಯ ಡಿ.ಟಿ. ಇಮ್ರಾಪೂರ ಸ್ವಾಗತಿಸಿರು. ಶಿಕ್ಷಕ ಗುಡದೀರಪ್ಪ ಲಿಂಗಶೆಟ್ಟರ ನಿರೂಪಿಸಿ, ವಂದಿಸಿದರು.



ಮುಂಡರಗಿಯ ಸ್ವಾಮಿ ವಿವೇಕಾನಂದ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಆವರಣದಲ್ಲಿರುವ 60ಕ್ಕೂ ಹೆಚ್ಚು ಮರಗಳಿಗೆ ಗುರುವಾರ ನೀರಿನ ತೊಟ್ಟಿಗಳನ್ನು ಕಟ್ಟಲಾಯಿತು.

> ಮನುಷ್ಯ ನಿಸರ್ಗದ ಮೇಲೆ ಅವಲಂಬಿತವಾದ ಪ್ರಾಣಿ. ನಿಸರ್ಗದಲ್ಲಿ ಮರ ಗಿಡಗಳನ್ನು ಹೆಚ್ಚು-ಹೆಚ್ಚು ಬೆಳೆಸುವುದರೊಂದಿಗೆ ಪ್ರಾಣಿ-ಪಕ್ಷಿಗಳ ಉಳಿವಿಗಾಗಿ ಶ್ರಮಿಸಬೇಕು. ಸಾಧ್ಯವಾದ ಕಡೆ ನೀರಿನ ತೊಟ್ಟಿಗಳನ್ನು ಇಟ್ಟು, ಕಾಳುಗಳನ್ನು ಹಾಕಿ ಪ್ರಾಣಿ- ಪಕ್ಷಿಗಳ ಸಂಕುಲಗಳನ್ನು ಉಳಿಸುವ ಮಾನವೀಯ ಕೆಲಸವನ್ನು ಮಾಡಬೇಕು.
> • **ಈಶ್ವರಪ್ಪ ಹಂಚಿನಾಳ** ರೈತರು

ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಣೆ



ಕಾರ್ಯಕ್ರಮವನ್ನು ಹಿರಿಯ ಪತ್ರಕರ್ತ ಗಿರೀಶ ಕಮ್ಮಾರ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಗದಗ

ನಗರದ ಈಶ್ವರ ದೇವಸ್ಥಾನದಲ್ಲಿ ಅರ್ಬನ್ ಶೈನ್ ಗ್ರೂಪ್ ವತಿಯಿಂದ ಕಾರ್ಮಿಕ ದಿನಾಚರಣೆ ಅಂಗವಾಗಿ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಿಸಲಾಯಿತು.

ಈ ವೇಳೆ ಹಿರಿಯ ಪತ್ರಕರ್ತ ಶಿವಕುಮಾರ ಕುಷ್ಟಗಿ ಮಾತನಾಡಿ, ಅಸಂಘಟಿತ ಕಾರ್ಮಿಕರ ಸಂಖ್ಯೆ ಹೆಚ್ಚಿದ್ದು, ಅವರಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿದೆ. ಕಾರ್ಮಿಕರು ಸದೃಢವಾಗಿ, ಸಂಘಟಿತವಾಗಿ ದುಡಿದರೆ ಮಾತ್ರ ಮಾಲೀಕರು ಸದೃಢವಾಗಿ ಬೆಳೆಯಲು ಸಾಧ್ಯ. ಜಾಗೃತಿ ಕೊರತೆಯಿಂದ ಕಾರ್ಮಿಕರು ಸೌಲಭ್ಯಗಳಿಂದ ವಂಚಿತರಾಗಿದ್ದಾರೆ ಎಂದರು.

ಲೋಕೋಪಯೋಗಿ ಇಲಾಖೆಯ ನಿವೃತ್ತ ಎಂಜಿನಿಯರ್‌ನರೇಂದ್ರ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ ಗಿರೀಶ ಕಮ್ಮಾರ, ಪ್ರವೀಣ ನಂದಿಕೋಲಮಠ, ಟಿ.ಎಂ. ರಾಮನಗೌಡ್ರ, ವಿ.ಎಂ. ರಾಮನಗೌಡ್ರ, ಈಶ್ವರ ಲಕ್ಷ್ಮೇಶ್ವರ, ಗ್ರೂಪ್‌ನ ವ್ಯವಸ್ಥಾಪಕ ನಿರ್ದೇಶಕ ವಿನೋದ ರಾಮನಗೌಡ್ರ, ಚೇತನಕುಮಾರ ಹುಡೇದ, ವಿಜಯಕುಮಾರ ಕಣವಿ, ರವಿ ಬ್ಯಾಹಟ್ಟಿ ಸೇರಿದಂತೆ ಅನೇಕರು ಇದ್ದರು. ಬಸವರಾಜ ಶಿರುಂಜ ನಿರೂಪಿದರು.

ಶಿಕ್ಷಕರ ಕೈಯಲ್ಲಿದೆ ಸರ್ಕಾರಿ ಶಾಲೆಗಳ ಭವಿಷ್ಯ: ಪಾಟೀಲ

ಕನ್ನಡ ಕವಿತೆಗಳ ವಾಚನ, ಗೀತಗಾಯನ ಕಾರ್ಯಕ್ರಮ



ಕನ್ನಡ ಕವಿತೆಗಳ ವಾಚನ ಹಾಗೂ ಗೀತಗಾಯನ ಮಕ್ಕಳ ಬೇಸಿಗೆ ಶಿಬಿರವನ್ನು ಆನಂದಗೌಡ ಪಾಟೀಲ ಉದ್ಘಾಟಿಸಿದರು. ಶಾಲಾ ಮುಖ್ಯೋಪಾಧ್ಯಾಯ ಡಾ. ನಿಂಗು ಸೊಲಗಿ ಇತರರು ಇದ್ದರು.

• **ಕನ್ನಡಪ್ರಭ ವಾರ್ತೆ** ಮುಂಡರಗಿ

ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಉತ್ತಮವಾಗಿ ಕಾರ್ಯನಿರ್ವಹಿಸಿದರೆ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತದೆ. ಇದರಿಂದ ಮಕ್ಕಳ ಕೊರತೆಯಾಗಿ ಸರ್ಕಾರಿ ಶಾಲೆಗಳು ಮುಚ್ಚುವ ಸ್ಥಿತಿ ಬರುವುದಿಲ್ಲ ಎಂದು ಲಿಂ. ಶರಣ ಎಚ್. ಎಸ್. ಪಾಟೀಲ ಪ್ರತಿಷ್ಠಾನದ ಮುಖ್ಯಸ್ಥ ಹಾಗೂ ಶಿಕ್ಷಣಪ್ರೇಮಿ ಆನಂದಗೌಡ ಪಾಟೀಲ ತಿಳಿಸಿದರು.

ಮುಂಡರಗಿಯ ರಾಮೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು, ಎಚ್. ಎಸ್. ಪಾಟೀಲ ಪ್ರತಿಷ್ಠಾನದ ಆಶ್ರಯದಲ್ಲಿ ಜರುಗಿದ ಕನ್ನಡ ಕವಿತೆಗಳ ವಾಚನ ಹಾಗೂ ಗೀತಗಾಯನ ಮಕ್ಕಳ ಎರಡು ದಿನಗಳ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾದಂತೆ ಸರ್ಕಾರದಿಂದ ಅಭಿವೃದ್ಧಿ ಸೇರಿದಂತೆ ವಿವಿಧ ಕಾರ್ಯಗಳಿಗೆ ಹೆಚ್ಚಿನ ಅನುದಾನ ಬರುತ್ತದೆ. ಜತೆಗೆ ಆಯಾ ಗ್ರಾಮದಲ್ಲಿನ ಸಾರ್ವಜನಿಕರೂ ಸಹಕಾರ ನೀಡುವ ಮೂಲಕ ಶಾಲೆಗಳ ಅಭಿವೃದ್ಧಿಗೆ ಕೈ ಜೋಡಿಸುತ್ತಾರೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ ಮಾತನಾಡಿ, ತಾಲೂಕಿನ ಎಲ್ಲ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ ಹಾಗೂ ಶಿಕ್ಷಕರ ಸಹಕಾರ ಮತ್ತು ಮಕ್ಕಳ ಶ್ರಮದಿಂದಾಗಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಉತ್ತಮ ಗುಣಮಟ್ಟದ ಫಲಿತಾಂಶ ಬಂದಿದೆ. ಡಾ. ನಿಂಗು ಸೊಲಗಿ ಅವರು ಹೋದಲ್ಲೆಲ್ಲ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಾ ದಾನಿಗಳ ಸಹಕಾರದಿಂದ ಶಾಲಾ ಅಭಿವೃದ್ಧಿ ಮಾಡುತ್ತಾ ಬಂದಿದ್ದಾರೆ. ಇದೀಗ ಬೇಸಿಗೆ ಶಿಬಿರ ಮಾಡುತ್ತಿದ್ದು, ಮಕ್ಕಳಲ್ಲಿರುವ ಸೃಜನಶೀಲತೆಗೆ ಇಂತಹ ಶಿಬಿರಗಳು ಇಂಬು ನೀಡುತ್ತವೆ ಎಂದರು.

ಗ್ರಾಮದ ಮುಖಂಡ ಬಸವರಾಜ ತಿಗರಿ ಮಾತನಾಡಿ, ಆನಂದಗೌಡ ಪಾಟೀಲ ಪಕ್ಷಾತೀತ, ಜಾತ್ಯತೀತವಾಗಿ ತಾಲೂಕಿನ ಸರ್ಕಾರಿ ಶಾಲೆಗಳಿಗೆ ಸಹಾಯ ಮಾಡುತ್ತಾ ಬಂದಿದ್ದು, ಕಳೆದ ಎರಡು ವರ್ಷಗಳಿಂದ ನಮ್ಮೂರಿನ ಶಾಲೆಗೆ ಲಕ್ಷಾಂತರ ರು. ದಾನ ನೀಡುವ ಮೂಲಕ ಶಾಲೆ ಅಭಿವೃದ್ಧಿಗೆ ಶ್ರಮಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ತಾಲೂಕು ಕಸಾಪ ಅಧ್ಯಕ್ಷ ಎಂ.ಜಿ. ಗಚ್ಚಣ್ಣವರ ಮಾತನಾಡಿ, ಕಸಾಪದಿಂದ ಮಕ್ಕಳಿಗಾಗಿ ಬೇಸಿಗೆ ಶಿಬಿರ ಆಯೋಜಿಸುತ್ತಾ ಬರುತ್ತಿದ್ದು, ಇದರಿಂದ ಮಕ್ಕಳಲ್ಲಿ ಜ್ಞಾನ ವೃದ್ಧಿಯಾಗುವುದರ ಜತೆಗೆ ವ್ಯಕ್ತಿತ್ವ ವಿಕಸನಗೊಳಿಸುವುದು ಶಿಬಿರದ ಉದ್ದೇಶವಾಗಿದೆ ಎಂದರು.

ಶಿಬಿರದ ನಿರ್ದೇಶಕ, ಶಾಲಾ ಮುಖ್ಯೋಪಾಧ್ಯಾಯ ಡಾ. ನಿಂಗು ಸೊಲಗಿ ಮಾತನಾಡಿ, ಸರ್ಕಾರದ ಅನುದಾನದ ಜತೆಗೆ ಗ್ರಾಮದ ಸಾರ್ವಜನಿಕರ ಹಾಗೂ ದಾನಿಗಳ ದಾನದಿಂದ ಶಾಲಾ ಅಭಿವೃದ್ಧಿಗೊಳಿಸುತ್ತಾ ಬಂದಿದ್ದು, ಎಲ್ಲರ ಶ್ರಮದಿಂದಾಗಿ ರಾಮೇನಹಳ್ಳಿ ಶಾಲೆ ಮಕ್ಕಳ ಆಕರ್ಷಣೆಯ ಕೇಂದ್ರವಾಗಿ ಬೆಳೆದು ನಿಂತಿದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಉಮೇಶ ದಂಡೀನ ಅಧ್ಯಕ್ಷತೆ ವಹಿಸಿದ್ದರು. ಶಿಬಿರದಲ್ಲಿ ಹೂವಿನಹಡಗಲಿಯ ಶಿಕ್ಷಕರಾದ ದ್ವಾರಕೀಶರಡ್ಡಿ, ಹೊಳಗುಂದಿಯ ಆರ್.ಬಿ. ಗುರುಬಸವರಾಜ, ವಿಠಲ್ ಜಂಬಗಿ, ಮಹೇಶ ಬಾಗಳಿ, ಶರಣಪ್ಪ ದಂಡೀನ, ಕೊಟೆಪ್ಪ ಸುಣಗಾರ, ಸಹದೇವಪ್ಪ ಡಂಬಳ, ಜಯಶ್ರೀ ಅಳವಂಡಿ, ಶಂಕರ ಕುಕನೂರು, ಶಿವು ವಾಲಿಕಾರ, ಮಂಜುನಾಥ ಮುಧೋಳ, ಶಾಲಾ ಶಿಕ್ಷಕರಾದ ಬಿ.ಎಚ್. ಹಲವಾಗಲಿ, ಪಿ.ಆರ್. ಗಡಾದ, ಶಿವಲೀಲಾ ಅಬ್ಬಿಗೇರಿ, ಪಿ.ಎಂ. ಲಾಂಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ರಮೇಶಗೌಡ ಪಾಟೀಲ ನಿರೂಪಿಸಿದರು. ಎನ್.ಎನ್. ಕಲಕೇರಿ ವಂದಿಸಿದರು.

ಅಧ್ಯಾತ್ಮ ಸಂಪತ್ತಿನಿಂದ ಸುಖ, ಶಾಂತಿ

ಧರ್ಮ ಜಾಗೃತಿ ಸಮಾರಂಭದಲ್ಲಿ ಬಾಳೆಹೊನ್ನೂರು ಡಾ. ರಂಭಾಪುರಿ ಸ್ವಾಮೀಜಿ



ಧರ್ಮ ಜಾಗೃತಿ ಸಮಾರಂಭವನ್ನು ಆನಂದ ಮೆಕ್ಕಿ ಉದ್ಘಾಟಿಸಿದರು. ರಂಭಾಪುರಿ ಸ್ವಾಮೀಜಿ ಇತರರು ಪಾಲ್ಗೊಂಡಿದ್ದರು.

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಸಿರಿತನ ಬಂದಾಗ ಹಿಗ್ಗದೇ ಬಡತನ ಬಂದಾಗ ಕುಗ್ಗದೇ ಕ್ರಿಯಾಶೀಲನಾಗಿ ಬಾಳುವುದೇ ಜೀವನದ ಗುರಿಯಾಗಬೇಕಾಗಿದೆ. ಹೊರಗಿನ ಶ್ರೀಮಂತಿಕೆ ಹೆಚ್ಚಿಸಿಕೊಳ್ಳುವುದರ ಜತೆಗೆ ಒಳಗಿರುವ ಆಧ್ಯಾತ್ಮ ಸಂಪತ್ತನ್ನು ಹೆಚ್ಚಿಸಿಕೊಳ್ಳಬೇಕಾಗಿದೆ. ಅಧ್ಯಾತ್ಮ ಸಂಪತ್ತಿನಿಂದ ಜೀವನದಲ್ಲಿ ಸುಖ, ಶಾಂತಿ ಪ್ರಾಪ್ತವಾಗುತ್ತದೆ ಎಂದು ಬಾಳೆಹೊನ್ನೂರು ರಂಭಾಪುರಿ ಡಾ. ವೀರಸೋಮೇಶ್ವರ ಸ್ವಾಮೀಜಿ ಅಭಿಪ್ರಾಯಪಟ್ಟರು.

ಗುರುವಾರ ಹಾಲೇವಾಡಿಮಠದ ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ- ಜಯಂತ್ಯುತ್ಸವ ಹಾಗೂ ಮಾತಾ ಪಿತೃಗಳ ಪುಣ್ಯಸ್ಮರಣೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸತ್ಯ ಶುದ್ಧವಾದ ಜೀವನಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆಯ ಅಗತ್ಯವಿದೆ. ಧರ್ಮದ ವೃಕ್ಷ ಬರೀ ವೃಕ್ಷವಲ್ಲ. ಅದೊಂದು ಅದ್ಭುತ ಅಶ್ವತ್ಥ ವೃಕ್ಷ. ಸಮೃದ್ಧಿ ಶಾಂತಿಯ ತಂಗಾಳಿ ನೀಡುವ ಹೆಮ್ಮರ. ಆಚಾರ್ಯರು ಋಷಿಮುನಿಗಳು ಸಾಧು ಸಂತ ಮಹಾಂತರು ಜ್ಞಾನ ಸುಧೆಯನ್ನು ಹಂಚುವುದರ ಮೂಲಕ ಇತರರ ಬಾಳು ಬೆಳಗಿಸುತ್ತಾರೆ ಎಂದರು.

ಸಮಾರಂಭ ಉದ್ಘಾಟಿಸಿದ ಆನಂದ ಮೆಕ್ಕಿ ಮಾತನಾಡಿ, ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮ ಶ್ರದ್ಧೆ ಮತ್ತು ಸದಾಚಾರ ಬೆಳೆದು ಬರಬೇಕಾಗಿದೆ. ಈ ದಿಶೆಯಲ್ಲಿ ಹಾಲೇವಾಡಿಮಠ ಸಹೋದರರ ಕಾರ್ಯ ಸ್ತುತ್ಯವಾದುದೆಂದರು.

ಚಂಬಣ್ಣ ಬಾಳಿಕಾಯಿ ಅವರು ಭಾವಚಿತ್ರ ಬಿಡುಗಡೆ ಮಾಡಿ ಮಾತನಾಡಿ, ಹಾಲೇವಾಡಿಮಠ ಬಂಧುಗಳು ಕೈಗೊಂಡಿರುವ ಧಾರ್ಮಿಕ ಕಾರ್ಯಗಳು ಇತರರಿಗೆ ಸ್ಫೂರ್ತಿದಾಯಕವಾಗಿವೆ ಎಂದರು.

ನೇತೃತ್ವ ವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ದುಡಿಮೆಯ ಬದುಕಿನಿಂದ ಉತ್ಕರ್ಷ ಸಾಧ್ಯ. ನಡೆಯುವ ಕಾಲು ದುಡಿಯುವ ಕೈಗಳು ಇರದಿದ್ದರೆ ಏನೂ ಮಾಡಲಾಗದು. ಅರಮನೆ ಇರಲಿ, ಗುಡಿಸಲೇ ಇರಲಿ. ದುಡಿಯುವುದರಲ್ಲಿ ಉತ್ಸಾಹ ಇದ್ದರೆ ಬದುಕು ಬಲಗೊಳ್ಳುತ್ತದೆ ಎಂದರು.

ಧರ್ಮದ ವೃಕ್ಷ ಬರೀ ವೃಕ್ಷವಲ್ಲ. ಅದೊಂದು ಅದ್ಭುತ ಅಶ್ವತ್ಥ ವೃಕ್ಷ. ಸಮೃದ್ಧಿ ಶಾಂತಿಯ ತಂಗಾಳಿ ನೀಡುವ ಹೆಮ್ಮರ. ಆಚಾರ್ಯರು ಋಷಿ ಮುನಿಗಳು ಸಾಧು ಸಂತ ಮಹಾಂತರು ಜ್ಞಾನ ಸುಧೆಯನ್ನು ಹಂಚುವುದರ ಮೂಲಕ ಇತರರ ಬಾಳು ಬೆಳಗಿಸುತ್ತಾರೆ.

• ಡಾ. ರಂಭಾಪುರಿ ಸ್ವಾಮೀಜಿ

ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮ ಶ್ರದ್ಧೆ ಮತ್ತು ಸದಾಚಾರ ಬೆಳೆದು ಬರಬೇಕಾಗಿದೆ. ಈ ದಿಶೆಯಲ್ಲಿ ಹಾಲೇವಾಡಿಮಠ ಸಹೋದರರ ಕಾರ್ಯ ಸ್ತುತ್ಯವಾದದ್ದು.

• ಆನಂದ ಮೆಕ್ಕಿ

ಡಾ. ಸಿದ್ದಲಿಂಗೇಶ ಸಜ್ಜನಶೆಟ್ರ ಉಪನ್ಯಾಸ ನೀಡಿದರು. ವೀರೇಶ ಕೂಗು, ವಿಜಯ ಮಹಾಂತಶೆಟ್ಟರ, ಕುಬೇರಪ್ಪ ಮಹಾಂತಶೆಟ್ಟರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಮೈಸೂರು- ಬನ್ನಿಕೊಪ್ಪದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯರು, ಗಂಜೀಗಟ್ಟಿ ಡಾ. ವೈಜನಾಥ ಶಿವಾಚಾರ್ಯರು, ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ಕರೇವಾಡಿಮಠ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು ಮಾತನಾಡಿ ದರು. ಶಿವಲಿಂಗಯ್ಯ ಹಾಲೇವಾಡಿಮಠ ಕಾರ್ಯಕ್ರಮ ವನ್ನು ಸಂಯೋಜನೆಗೊಳಿಸಿದ್ದರು. ಡಾ. ಎಸ್.ಜಿ. ಹಾಲೇವಾಡಿಮಠ ಸ್ವಾಗತಿಸಿದರು. ಡಾ. ಪ್ರಭುಸ್ವಾಮಿ ಜಿ. ಹಾಲೇವಾಡಿಮಠ ಪ್ರಾಸ್ತಾವಿಕವಾಗಿ ಮಾತನಾಡಿ ದರು. ಗುರುವಾರ ಸಂಜೆ ಮಾಜಿ ಮುಖ್ಯ ಮಂತ್ರಿ ಸಂಸದ ಬಸವರಾಜ ಬೊಮ್ಮಾಯಿಯವರು ಮುಕ್ತಿಮಂದಿರ ಕ್ಷೇತ್ರಕ್ಕೆ ಭೇಟಿ ನೀಡಿ ಲಿಂ. ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಗದ್ದುಗೆ ದರ್ಶನ ಮಾಡಿ ರಂಭಾಪುರಿ ಡಾ. ವೀರಸೋಮೇಶ್ವರ ಶ್ರೀಗಳ ಆಶೀರ್ವಾದ ಪಡೆದರು.

ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ಗದಗ: 2024 - 25ನೇ ಸಾಲಿನ ರೋಣ, ಗಜೇಂದ್ರಗಡ ತಾಲೂಕಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನ ತಿರಸ್ಕೃತ ಗೊಂಡ ಬೆಳೆವಿಮೆ ಪ್ರಸ್ತಾವನೆಗಳಿಗೆ ರೈತರಿಂದ ಆಕ್ಷೇಪಣೆ ಸಲ್ಲಿಸುವ ಬಗ್ಗೆ ರೋಣದ ಸಹಾಯಕ ಕೃಷಿ ನಿರ್ದೇಶಕರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಟಕ ಕಲೆ ಶಕ್ತಿಯುತ ಮಾಧ್ಯಮ

• **ಕನ್ನಡಪ್ರಭ ವಾರ್ತೆ** ನರೇಗಲ್ಲ

ಆಧುನಿಕತೆಯ ಅಬ್ಬರದಲ್ಲಿ ಕಣ್ಮರೆಯಾಗುತ್ತಿರುವ ನಾಟಕ, ದೊಡ್ಡಾಟ, ಬಯಲಾಟದಂಥ ಸಾಂಪ್ರದಾಯಿಕ ಕಲೆಗಳನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಸ್ಥಳೀಯ ಕಟ್ಟಿಬಸವೇಶ್ವರ ಯುವಕ ಸಂಘ ಮುಂದಾಗಿದೆ ಎಂದು ನ್ಯಾಯವಾದಿ ಉಮೇಶ ಸಂಗನಾಳಮಠ ತಿಳಿಸಿದರು.

ಪಟ್ಟಣದ ರೆಹಮಾನ ಶಾವಲಿ ಶರಣರ ಉರೂಸ್ ಅಂಗವಾಗಿ ಮೇ 11ರಂದು ರಾತ್ರಿ 10.30ಕ್ಕೆ ಆಯೋಜಿಸಿರುವ ಧರ್ಮದ ನುಡಿ ಬೆಂಕಿಯ ಕಿಡಿ ಎಂಬ ಸಾಮಾಜಿಕ ಹಾಗೂ ಕ್ರಾಂತಿಕಾರಿ ನಾಟಕ ಪ್ರದರ್ಶನದ ಹಿನ್ನೆಲೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಯುವಜನತೆಗೆ ನಾಟಕದಲ್ಲಿರುವ ಸಂಬಂಧ, ಮಾನವೀಯ ಮೌಲ್ಯ ಹಾಗೂ ಸಾಮಾಜಿಕ ಜವಾಬ್ದಾರಿಗಳನ್ನು ಪರಿಚಯಿಸುವ ಉದ್ದೇಶದಿಂದ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದರು. ನಿವೃತ್ತ ಶಿಕ್ಷಕ ಮಲ್ಲನಗೌಡ ಪಾಯಪ್ಪಗೌಡ್ರ ಮಾತನಾಡಿದರು. ನಂತರ ನಾಟಕದ ಭಿತ್ತಿಪತ್ರಗಳನ್ನು ಮುಖಂಡರು ಬಿಡುಗಡೆಗೊಳಿಸಿದರು. ಪಪಂ ಮಾಜಿ ಅಧ್ಯಕ್ಷ ಕಲ್ಮೇಶ ತೊಂಡಿಹಾಳ, ಪರಪ್ಪ ಬೆಡಗಲ್ಲ, ಮುತ್ತಪ್ಪ ಮಾವಿನಕಾಯಿ, ಮಲ್ಲಪ್ಪ ಮಾರನಬಸರಿ, ಫಕೀರಗೌಡ ಪಾಯಪ್ಪಗೌಡ್ರ, ತರಬೇತುದಾರ ಶಂಕರ ರೊಟ್ಟಿ, ಸಂಚಾಲಕ ಮಹದೇವಪ್ಪ ಬೇವಿನಕಟ್ಟಿ, ವೀರಣ್ಣ ಗುಜಮಾಗಡಿ, ಮುತ್ತಪ್ಪ ಬಿಷ್ಟನಗೌಡ್ರ, ಶಿವು ಮುಗಳಿ, ಬಸವರಾಜ ಮಾಳವಾಡ, ಶ್ರೀಕಾಂತ ಹೊಸಮನಿ, ಅಶೋಕ ಬಾರಕೇರ, ಮಂಜುನಾಥ ಮಲ್ಲನಗೌಡ್ರ ಇದ್ದರು.